**CC 7555/2024**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ವಿಜಯನಗರ ಜಿಲ್ಲೆ, ಹೊಸಪೇಟೆ.**

**ಸಿಸಿ ನಂಬರ್** 7555/2024

**ಸಿ ಡಬ್ಲ್ಯೂ** -3

**ಪಿ ಡಬ್ಲ್ಯೂ** -3

**ಸಾಕ್ಷಿಯ ಹೆಸರು -** **ಎಂ ಖಾಜಾ ಹುಸೇನ್**
**ತಂದೆಯ ಹೆಸರು -** **ಮೊಹಮ್ಮದ್ ಹುಸೇನ್**
**ವಯಸ್ಸು -** 48 **ವರ್ಷಗಳು**
**ಉದ್ಯೋಗ -** **ವೆಲ್ಡರ್**
**ವಾಸಸ್ಥಳ -** **ಹೊಸಪೇಟೆ**

**ಸಾಕ್ಷಿಯನ್ನು ದಿನಾಂಕಃ** 07-03-2026 **ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕೃತ್ಯ ಸ್ಥಳ ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿಃ **2** ಎಂದು, ಸಾಕ್ಷಿಯ ಸಹಿಯನ್ನು ನಿಪಿಃ **2(**ಸಿ**)** ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ಈಗ್ಗೆ **1 ½** ವರ್ಷಗಳ ಹಿಂದೆ ಪೋಲಿಸ್ ಠಾಣೆಯಲ್ಲಿ ಮಾಡಿದ್ದೆ. ನಿಪಿಃ **1** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಆಗಿಲ್ಲ.

ಕಚ್ಚಾ ನಕಾಶೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕಚ್ಚಾ ನಕಾಶೆಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿಃ **3** ಎಂದು ಗುರುತಿಸಲಾಗಿದೆ, ಸಾಕ್ಷಿಯ ಸಹಿಯನ್ನು ನಿಪಿಃ **3(**ಸಿ**)** ಎಂದು ಗುರುತಿಸಲಾಯಿತು.

ಈಗ ನಾನು ನೋಡುತ್ತಿರುವ **2** ಪೋಟೋಗಳಲ್ಲಿನ ವ್ಯಕ್ತಿ ನಾನೇ ಇರುತ್ತೇನೆ. ಸದರಿ ಪೋಟೋಗಳನ್ನು ಈಗಾಗಲೇ ಒಟ್ಟಾಗಿ ನಿಪಿಃ **4** ಎಂದು ಗುರುತಿಸಲಾಯಿತು.

ನಿಪಿಃ **4** ರ ಫೋಟೋವನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ**

ದಿಃ 10-06-2024 ರಂದು ಬೆಳಿಗೆಗ 10.00 ಗಂಟೆಗೆ ಪ್ರಕರಣದ ತನಿಖಾಧಿಕಾರಿಯೂ ನನ್ನನ್ನು ಮತ್ತು ಚಾಸಾ -2 ರವರನ್ನು ಚಾಸಾ -1 ರವರ ಮನೆಯ ಹತ್ತಿರ ಕರೆಯಿಸಿ ಚಾಸಾ -1 ರವರು ತೋರಿಸಿದ ಸ್ಥಳದಲ್ಲಿ ಕಳ್ಳತನದ ವಿಚಾರವಾಗಿ ಪಂಚನಾಮೆಯನ್ನು ನಿಪಿಃ 2 ರಂತೆ ಬೆಳಿಗ್ಗೆ 10.00 ರಿಂದ 10.45 ರವರೆಗೆ ಮಾಡಿದ್ದರು ಅಂದರೆ ಸರಿಯಲ್ಲ. ಆ ಸಂದರ್ಭದಲ್ಲಿ ನಿಪಿಃ 3 ರ ನಕಾಶೆ ಮತ್ತು ನಿಪಿಃ 4 ರ ಫೋಟೋ ತೆಗೆಯಲಾಗಿತ್ತು ಅಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆ ಮಾಡಿ, ನಕಾಶೆ ಮತ್ತು ಫೋಟೋ ತೆಗೆದಿದ್ದರು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ಶ್ರೀ ಬಿ ಎಂ ವಕೀಲರಿಂದಃ** ಇಲ್ಲಾ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ವಿಜಯನಗರ ಜಿಲ್ಲೆ, ಹೊಸಪೇಟೆ.